## ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 1225 |
| ಮಾನ್ಯ ಸದಸ್ಯರ ಹೆಸರು | ಶ್ರೀ ಆರ್ ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | 23-12-2021 |
| ಉತ್ತರಿಸಬೇಕಾದವರು | ಅಬಕಾರಿ ಸಚಿವರು |

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಬೇರೆ ರಾಜ್ಯಗಳಿಗೆ ಹೋಲಿಸಿದರೆ ಕರ್ನಾಟಕದಲ್ಲಿ ಮದ್ಯದಂಗಡಿಗಳ ಸಂಖ್ಯೆ ಹೆಚ್ಚಾಗಿದೆ ಎಂಬುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಇದನ್ನು ಕಡಿಮೆ ಮಾಡಲು ಯಾವ ಕ್ರಮ ಕೈಗೊಳ್ಳಲಾಗುವುದು; | ಬೇರೆ ರಾಜ್ಯಗಳಾದ ಕೇರಳ, ಆಂಧ್ರ ಪ್ರದೇಶ, ತೆಲಂಗಾಣ, ತಮಿಳುನಾಡು ಹಾಗೂ ಮಹಾರಾಷ್ಟ್ರ ರಾಜ್ಯಗಳಲ್ಲಿರುವ ಅಬಕಾರಿ ಸನ್ನದುಗಳ ಸಂಖ್ಯೆಯನ್ನು ವಿಶ್ಲೇಷಿಸಲಾಗಿ, ಮಹಾರಾಷ್ಟ್ರ ರಾಜ್ಯದಲ್ಲಿ ಸುಮಾರು 25,000 ವಿವಿಧ ಬಗೆಯ ಅಬಕಾರಿ ಸನ್ನದುಗಳು ಕಾರ್ಯನಿರ್ವಹಿಸುತ್ತಿದ್ದು, ಕರ್ನಾಟಕ ರಾಜ್ಯದಲ್ಲಿನ ಅಬಕಾರಿ ಸನ್ನದುಗಳ ಸಂಖ್ಯೆಗೆ ಹೋಲಿಸಿದಲ್ಲಿ ಎರಡು ಪಟ್ಟಿಗಿಂತ ಹೆಚ್ಚಿನ ಸಂಖ್ಯೆಯ ಸನ್ನದುಗಳನ್ನು ಹೊಂದಿದೆ. |
| ಆ) | ಮದ್ಯಪಾನದಿಂದ ಆರೋಗ್ಯದ ಮೇಲೆ ದುಷ್ಪರಿಣಾಮವಾಗುವುದಲ್ಲದೆ, ಸಂಸಾರಗಳು ಹಾಳಾಗುವುದರಿಂದ ಹಂತ ಹಂತವಾಗಿ ಪಾನ ನಿರೋಧವನ್ನು ನಿಷೇಧಿಸಲು ಸರ್ಕಾರ ಆಲೋಚಿಸುತ್ತದೆಯೇ; ಈ ಬಗ್ಗೆ ಗಂಭೀರ ಕ್ರಮ ಕೈಗೊಳ್ಳಲಾಗುವುದೇ. | ಪಾನನಿರೋಧ ನಿಷೇಧಿಸುವ ಪ್ರಸ್ತಾವನೆಯು ಸರ್ಕಾರದ ಮುಂದೆ ಇರುವುದಿಲ್ಲ. |
| ಇ) | ಗ್ರಾಮೀಣ ಪ್ರದೇಶಗಳಲ್ಲೂ ಮದ್ಯ ಮಾರಾಟ ಅವ್ಯಾಹತವಾಗಿ ನಡೆಯುತ್ತಿರುವುದರಿಂದ ಮಕ್ಕಳೂ ಸೇರಿದಂತೆ ಸಾರ್ವಜನಿಕರ ಆರೋಗ್ಯದ ಮೇಲೆ ಕೆಟ್ಟ ಪರಿಣಾಮ ಉಂಟಾಗುತ್ತಿರುವುದರಿಂದ ಸರ್ಕಾರ ಈ ಬಗ್ಗೆ ಗಂಭೀರ ಚಿಂತನೆ ನಡೆಸುತ್ತಿದೆಯೇ? | ಗ್ರಾಮೀಣ ಭಾಗದಲ್ಲಿ ಕೆಲವು ವ್ಯಕ್ತಿಗಳು ಸ್ವಲಾಭಕ್ಕಾಗಿ ಗ್ರಾಮದ ಚಿಲ್ಲರೆ ಅಂಗಡಿಗಳಲ್ಲಿ ಅಕ್ರಮವಾಗಿ ಮದ್ಯ ಮಾರಾಟ ಮಾಡುತ್ತಿದ್ದು, ಅಕ್ರಮ ಮದ್ಯ ಮಾರಾಟವನ್ನು ತಡೆಗಟ್ಟಲು ವಲಯ ವ್ಯಾಪ್ತಿಯ ರೂಟ್ ಗಳಲ್ಲಿ ನಿರಂತರವಾಗಿ ಗಸ್ತು ನಡೆಸಲಾಗುತ್ತಿದೆ. ಸದರಿ ಗಸ್ತಿನ ಸಮಯದಲ್ಲಿ ಮತ್ತು ದೂರು ಸ್ವೀಕೃತವಾದಲ್ಲಿ ಅಕ್ರಮವಾಗಿ ಮದ್ಯ ಮಾರಾಟ ಮಾಡುತ್ತಿರುವ |



Generated from eOffice by GOPALAIAH K, FD-EXCISE MIN(GK), EXCISE MINISTER, FINANCE DEPT.SEC on 22/12/2021 11:54 AM

| | | |
|---|---|---|
| | | ಸ್ಥಳಗಳ ಮೇಲೆ ದಾಳಿ ನಡೆಸಿ ಅಕ್ರಮಗಳು ಕಂಡು ಬಂದಲ್ಲಿ ಅಬಕಾರಿ ಕಾಯ್ದೆ ಮತ್ತು ನಿಯಮಗಳಾನುಸಾರ ಪ್ರಕರಣಗಳನ್ನು ದಾಖಲಿಸಲಾಗುತ್ತಿದೆ. ರಾಷ್ಟ್ರೀಯ ಮತ್ತು ರಾಜ್ಯ ಹೆದ್ದಾರಿಗಳಲ್ಲಿ ನಿಯಮಿತವಾಗಿ ರಸ್ತೆಗಾವಲು ನಡೆಸಿ ಸಂಶಯಾಸ್ಪದ ವಾಹನಗಳನ್ನು ತಪಾಸಣೆಗೆ ಒಳಪಡಿಸಲಾಗುತ್ತಿದೆ. ಜಿಲ್ಲಾ ಮಟ್ಟದಲ್ಲಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಸ್ಥಾಯಿ ಸಮಿತಿ ಸಭೆಯನ್ನು ಏರ್ಪಡಿಸಿ ಇತರೆ ಇಲಾಖೆಗಳೊಂದಿಗೆ ಸಮನ್ವಯ ಸಾಧಿಸಿ ಅಕ್ರಮ ಹತ್ತಿಕ್ಕಲು ಕ್ರಮ ವಹಿಸುವ ಕುರಿತು ಪೊಲೀಸ್ ವರಿಷ್ಠಾಧಿಕಾರಿಗಳು ಮತ್ತು ಜಿಲ್ಲಾ ಅರಣ್ಯ ಸಂರಕ್ಷಣಾಧಿಕಾರಿಗಳೊಂದಿಗೆ ಜಂಟಿ ಕಾರ್ಯಾಚರಣೆ ನಡೆಸಲಾಗುತ್ತಿದೆ. ಕರ್ನಾಟಕ ಅಬಕಾರಿ ಕಾಯ್ದೆ 1965 ರ ಕಲಂ 50 ರಂತೆ ಕಾರ್ಯವ್ಯಾಪ್ತಿಯಲ್ಲಿ ನಡೆಯುವ ಅಬಕಾರಿ ಅಕ್ರಮಗಳ ಕುರಿತು ಮಾಹಿತಿ ನೀಡಲು ತಿಳುವಳಿಕೆ ಪತ್ರ ಜಾರಿಗೊಳಿಸಲಾಗಿರುತ್ತದೆ.<br><br>ಸಾರ್ವಜನಿಕರಿಗೆ ಉತ್ತಮ ಗುಣಮಟ್ಟದ ಮದ್ಯವನ್ನು ಸೇವನೆಗೆ ಒದಗಿಸುವ ಸಲುವಾಗಿ ಅಬಕಾರಿ ಇಲಾಖೆಯು ಸನ್ನದುಗಳಲ್ಲಿ ನಿಯಮಗಳ ಉಲ್ಲಂಘನೆಗೆ ಆಸ್ಪದ ನೀಡದಂತೆ ಜಾರಿ ಮತ್ತು ತನಿಖಾ ಕಾರ್ಯಗಳನ್ನು ಕೈಗೊಳ್ಳುತ್ತಿದೆ. ಅಬಕಾರಿ ಆಯುಕ್ತರ ಸುತ್ತೋಲೆ ಸಂಖ್ಯೆ:ಇಸಿಎಸ್/02/ಜ.ಐಎಂಎಲ್/ಜಿಇಎನ್/2012 ದಿನಾಂಕ:20-09-2017ರಲ್ಲಿ ಅಪ್ರಾಪ್ತ ವಯಸ್ಕರಿಗೆ ಮದ್ಯ ಮಾರಾಟ ಮಾಡುವುದನ್ನು ತಡೆಗಟ್ಟುವ ಮತ್ತು ಅಂತಹವರ ವಿರುದ್ಧ ಕಾನೂನು ಕ್ರಮ ಜರುಗಿಸುವ ಸಂಬಂಧ ನಿರ್ದೇಶನ ನೀಡಿದ್ದು, ಕಾರ್ಯವ್ಯಾಪ್ತಿಯಲ್ಲಿನ ಅಧಿಕಾರಿ/ಸಿಬ್ಬಂದಿಗಳು ಸದರಿ ನಿರ್ದೇಶನವನ್ನು ಅನುಪಾಲನೆ ಮಾಡುತ್ತಿರುತ್ತಾರೆ. |

ಆಇ 139 ಇಎಲ್‌ಕ್ಯೂ 2021

(ಕೆ. ಗೋಪಾಲಯ್ಯ)
ಅಬಕಾರಿ ಸಚಿವರು



Generated from eOffice by GOPALAIAH K, FD-EXCISE MIN(GK), EXCISE MINISTER, FINANCE DEPT.SEC on 22/12/2021 11:54 AM